ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತನೆ

462 -ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸಲಾಗುವುದು;

ಆ) ಇವುಗಳಿಗೆ ಕೇಂದ್ರದ ಮಂಜೂರಾತಿ ದೊರೆತಿದೆಯೇ;

ಇ) ಇವುಗಳನ್ನು ಹೊರತುಪಡಿಸಿ ರಾಜ್ಯಕ್ಕೆ ಹೊಸ ರಾಷ್ಟ್ರೀಯ ಹೆದ್ದಾರಿಗಳನ್ನು ಮಂಜೂರು ಮಾಡಲಾಗಿದೆಯೇ;

ಈ) ಮಾಡಿದ್ದಲ್ಲಿ, ಯಾವ ಮಾರ್ಗಗಳನ್ನು ಹೊಸ ರಾಷ್ಟ್ರೀಯ ಹೆದ್ದಾರಿಗಳೆಂದು ಪರಿಗಣಿಸಲಾಗಿದೆ;

ಉ) ಇವುಗಳಲ್ಲಿ ಎಷ್ಟು ಮಾರ್ಗಗಳಲ್ಲಿ ಕಾಮಗಾರಿಗಳು ಪ್ರಗತಿಯಲ್ಲಿವೆ;

ಊ) ಇದಕ್ಕೆ ಕೇಂದ್ರ ಸರ್ಕಾರದಿಂದ ಬಂದಿರುವ ಹಣವೆಷ್ಟು?

ಶ್ರೀ ಕೆ.ಜೆ.ಜಾರ್ಜ್ (ಲೋಕೋಪಯೋಗಿ ಸಚಿವರು) :

ಅ) ಪಟ್ಟಿಯಲ್ಲಿ ಲಗತ್ತಿಸಲಾದ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಘೋಷಿಸಲು ಕೇಂದ್ರ ಸರ್ಕಾರವನ್ನು ಕೇಳಲಾಗಿದೆ

ಆ) - ಇಲ್ಲ -

ಇ) - ಇಲ್ಲ -

ಈ) - ಉದ್ಭವಿಸುವುದಿಲ್ಲ -

ಉ) - ಉದ್ಭವಿಸುವಿದಿಲ್ಲ -

ಊ) - ಉದ್ಭವಿಸುವುದಿಲ್ಲ -

ಕ್ರಮ ಸಂಖ್ಯೆ	ರಾಷ್ಟ್ರೀಯ ಹೆದ್ದಾರಿಯಾಗಿ ಘೋಷಿಸುವಂತೆ ಕೋರಿರುವ ರಾಜ್ಯ ಹೆದ್ದಾರಿಗಳು	ಉದ್ದ (ಕಿ.ಮೀ.)
1)	ಆಂಧ್ರಪ್ರದೇಶದ ಗೂಟಿಯಿಂದ ಗುಂಟಕಲ್ - ಬಳ್ಳಾರಿ - ಹೊಸಪೇಟೆ -ಕೊಪ್ಪಳ - ಗದಗ್ - ಹುಬ್ಬಳ್ಳಿ - ಕಾರವಾರ (ಇವುಗಳನ್ನು ಸೇರುವ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ-17)	:: 422
2)	ಬೆಂಗಳೂರು - ಮೈಸೂರು - ನಂಜನಗೂಡು - ಗುಂಡ್ಲುಪೇಟೆ - ಊಟಿ - ಕೊಯಮತ್ತೂರು (ರಾಷ್ಟ್ರೀಯ ಹೆದ್ದಾರಿ ಸಂಖ್ಯೆ: 47 ತಮಿಳುನಾಡಿನಲ್ಲಿ ಸೇರುವಂತೆ)	:: 220
3)	ಮೈಸೂರು - ಶ್ರೀರಂಗಪಟ್ಟಣ - ನಾಗಮಂಗಳ - ಚಿಕ್ಕನಾಯಕನಹಳ್ಳಿ - ಹುಳಿಯಾರ್ -ಹಿರಿಯೂರ್ - ಬಳ್ಳಾರಿ - ಷಹಪುರ ಗುಲ್ಬರ್ಗಾ - ಹುಮ್ನಾಬಾದ್ (ರಾಷ್ಟ್ರೀಯ ಹೆದ್ದಾರಿ 9ನ್ನು ಸೇರುವಂತೆ)	:: 678

4)	ತುಮಕೂರು - ಅರಸೀಕೆರೆ - ಶಿವಮೊಗ್ಗ - ಸಾಗರ - ಹೊನ್ನಾವರ - (ರಾಷ್ಟ್ರೀಯ ಹೆದ್ದಾರಿ 17ರಲ್ಲಿ ಸೇರುವಂತೆ)	::	332
5)	ಬೆಂಗಳೂರು - ಮೈಸೂರು - ಮಡಿಕೇರಿ - ಮಂಗಳೂರು (ರಾಷ್ಟ್ರೀಯ ಹೆದ್ದಾರಿ 17 ರಲ್ಲಿ ಸೇರುವಂತೆ)	::	385
6)	ಬೆಳಗಾಂ - ಬಿಜಾಪುರ - ಗುಲ್ಬರ್ಗಾ- ಹುಮ್ನಾಬಾದ್ (ರಾಷ್ಟ್ರೀಯ ಹೆದ್ದಾರಿ 9ನ್ನು ಸೇರುವಂತೆ)	::	364
7)	ಬೆಳಗಾಂ - ಬಾಗಲಕೋಟೆ - ರಾಯಚೂರು - ಮೆಹಬೂಬ್ನಗರ (ಆಂಧ್ರ ಪ್ರದೇಶದಲ್ಲಿ)	::	336
8)	ಚಿತ್ರದುರ್ಗ - ಹೊಳಲ್ಕೆರೆ - ಹೊಸದುರ್ಗ - ಚಿಕ್ಕಮಗಳೂರು - ಮೂಡಿಗೆರೆ - ಬೆಳ್ತಂಗಡಿ - ಬಂಟ್ವಾಳ - ಮಂಗಳೂರು (ರಾಷ್ಟ್ರೀಯ ಹೆದ್ದಾರಿ 17 ರಲ್ಲಿ ಸೇರುವಂತೆ)	::	283
9)	ಧಾರವಾಡ - ಲೋಂಡಾ - ಅನ್ಮೋಡ್ - ಪಣಜಿ (ರಾಷ್ಟ್ರೀಯ ಹೆದ್ದಾರಿ 17 ರಲ್ಲಿ ಸೇರುವಂತೆ)	::	95
10)	ಪಡುಬಿದ್ರಿ - ಕಾರ್ಕಳ - ಶೃಂಗೇರಿ - ತೀರ್ಥಹಳ್ಳಿ - ಶಿಕಾರಿಪುರ - ಶಿರಾಳಕೊಪ್ಪ - ಹುಬ್ಬಳ್ಳಿ - ಬಾಗಲಕೋಟೆ - ಹುನಗುಂದ	::	550
11)	ಶಿರಾ - (ಬೆಂಗಳೂರು - ಪೂನಾ ರಾಷ್ಟ್ರೀಯ ಹೆದ್ದಾರಿ 4) ಮಧುಗಿರಿ - ಗೌರಿಬಿದನೂರ್ - ಚಿಕ್ಕಬಳ್ಳಾಪುರ - ಚಿಂತಾಮಣಿ- ಶ್ರೀನಿವಾಸಪುರ - ಮುಳಬಾಗಿಲು (ಬೆಂಗಳೂರು - ಮದ್ರಾಸ್ ರಾಷ್ಟ್ರೀಯ ಹೆದ್ದಾರಿ ನಂ .4)	::	160
12)	ಚಿತ್ರದುರ್ಗ - ಶಿವಮೊಗ್ಗ - ಸಕಲೇಶಪುರ - ಮಡಿಕೇರಿ ಹಾಗೂ ಕೇರಳದಲ್ಲಿರುವ ತಲ್ಲಿಚೇರಿ	::	325
13)	ಬೆಂಗಳೂರು - ಕನಕಪುರ - ಮಳವಳ್ಳಿ - ನಂಜನಗೂಡು - ಸುಲ್ತಾನಬತ್ತೇರಿ - ಹಾಗೂ ಕೇರಳದಲ್ಲಿರುವ ಕಲ್ಲಿಕೋಟೆ	::	250
	ಒಟ್ಟು ಉದ್ದ		**4400 ಕಿ.ಮೀ.**

ರಾಜ್ಯದ ವಿದ್ಯುತ್ ಯೋಜನೆಗಳನ್ನು ಕಾರ್ಯಗೊಳಿಸುವುದು

287 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ಉಪ ಮುಖ್ಯಮಂತ್ರಿಗಳು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಳೆದು ನಾಲ್ಕು ವರ್ಷಗಳಲ್ಲಿ ಎಷ್ಟು ಮಿನಿ ಜಲವಿದ್ಯುತ್ ಹಾಗೂ ಇತರ ಜಲವಿದ್ಯುತ್ ಯೋಜನೆಗಳನ್ನು ಒಪ್ಪಿಗೆಗಾಗಿ ಕೇಂದ್ರ ಸರ್ಕಾರಕ್ಕೆ ಕಳುಹಿಸಿ ಕೊಟ್ಟಿದೆ. (ವರ್ಷವಾರು ಅಂಕಿ ಅಂಶಗಳನ್ನು ಒದಗಿಸುವುದು)